ಅ) *ಗುಲ್ಬರ್ಗಾ ಜಿಲ್ಲೆಯ ಜಿಲ್ಲಾ ಪರಿಷತ್ ಸಾಮಾನ್ಯ ಸಭೆಯ ನಿರ್ಣಯ ಪ್ರಕಾರ ಪ್ರೌಢಶಾಲೆಗಳನ್ನು ಪ್ರಾರಂಭ ಮಾಡಿದರೂ ಸಹ ಅನುಮೋದನೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಈ ಹಿಂದುಳಿದ ಹೈದರಾಬಾದ್ ಕರ್ನಾಟಕ ಭಾಗದಲ್ಲಿ ಶಿಕ್ಷಣ ಅಭಿವೃದ್ಧಿಗಾಗಿ ಅನುಮತಿ ನೀಡದೆ ಶಿಕ್ಷಣ ರಂಗದಲ್ಲಿ ಹಿಂದುಳಿದ ಬಗ್ಗೆ ಕ್ರಮ ಕೈಗೊಳ್ಳದಿರಲು ಕಾರಣಗಳೇನು?*

ಇ) *ಈ ವರ್ಷದಲ್ಲಾದರೂ ಪ್ರೌಢಶಾಲೆಗಳಿಗೆ ಮಂಜೂರಾತಿ ನೀಡಿ ಆ ಹಿಂದುಳಿದ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿ ಕೊಡಲಾಗುವುದೇ?*

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು) :

ಅ) ಜಿಲ್ಲಾ ಪರಿಷತ್ತಿನ ಸಾಮಾನ್ಯ ಸಭೆಯ ನಿರ್ಣಯಗಳ ಪ್ರಕಾರ ಗುಲ್ಬರ್ಗ ಜಿಲ್ಲೆಯಲ್ಲಿ ಯಾವುದೇ ಪ್ರೌಢ ಶಾಲೆಯನ್ನು ಪ್ರಾರಂಭಿಸಿರುವುದಿಲ್ಲ, ಶಾಲೆಗಳನ್ನು ಪ್ರಾರಂಭಿಸಿರುವ ಬಗ್ಗೆ ಪ್ರಸ್ತಾವನೆ ಬಂದಿದ್ದು ಅನುಮತಿ ನೀಡುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಶೈಕ್ಷಣಿಕ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗಿದೆ. ಈಗಾಗಲೇ 90-91 ನೇ ಸಾಲಿಗೆ ಚಿಂಚೋಳಿ ತಾಲ್ಲೂಕಿನ ಕೊಂಚಾವರಂ ಮತ್ತು ದೇಗಲಮಡಿ ಗ್ರಾಮಗಳಲ್ಲಿ ಎರಡು ಪ್ರೌಢ ಶಾಲೆಗಳನ್ನು ಪ್ರಾರಂಭಿಸಲಾಗಿದೆ.

ಇ) ಹೊಸ ಶಾಲೆಗಳನ್ನು ಪ್ರಾರಂಭಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ಅನೇಕಲ್ ತಾಲ್ಲೂಕಿನಲ್ಲಿರುವ ಖಾಸಗಿ ಪ್ರೌಢಶಾಲೆಗಳ ಸಂಖ್ಯೆ

507 - ಶ್ರೀ ಎಂ.ಪಿ. ಕೇಶವಮೂರ್ತಿ (ಅನೇಕಲ್) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಅನೇಕಲ್ ತಾಲ್ಲೂಕಿನಲ್ಲಿ ಎಷ್ಟು ಖಾಸಗಿ ಮತ್ತು ಸರ್ಕಾರಿ ಪ್ರೌಢಶಾಲೆಗಳಿವೆ, (ಪ್ರತ್ಯೇಕ ವಿವರ ತಿಳಿಸುವುದು)*

ಆ) *ಖಾಸಗಿ ಶಾಲೆಗಳಲ್ಲಿ ಅನುದಾನ ಪಡೆಯುತ್ತಿರುವ ಮತ್ತು ಅನುದಾನ ಪಡೆಯದಿರುವ ಪ್ರೌಢಶಾಲೆಗಳೆಷ್ಟು?*

ಇ) *ಪರಿಶಿಷ್ಟ ಜನಾಂಗದವರಿಂದ ನಡೆಸುತ್ತಿರುವ ಪ್ರೌಢಶಾಲೆಗಳೆಷ್ಟು?*

ಈ) *ಅನುದಾನ ಕೊಡುತ್ತಿರುವ ಪ್ರೌಢಶಾಲೆಗಳಲ್ಲಿ ಮೀಸಲಾತಿಯನ್ನು ಪಾಲಿಸಲಾಗುತ್ತಿದೆಯೇ, ಹಾಗಿದ್ದಲ್ಲಿ ಬೋಧಕ ಮತ್ತು ಬೋಧಕೇತರರ ವಿವರ ಕೊಡುವುದು.*

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು)

ಅ) ಖಾಸಗಿ ಪ್ರೌಢ ಶಾಲೆಗಳು -11

ಸರ್ಕಾರಿ ಪ್ರೌಢ ಶಾಲೆಗಳು -3

ಆ) ಅನುದಾನ ಪಡೆಯುತ್ತಿರುವ ಪ್ರೌಢ ಶಾಲೆಗಳು -10

ಅನುದಾನ ಪಡೆಯದಿರುವ ಪ್ರೌಢ ಶಾಲೆಗಳು -1

ಇ) -2-

ಈ) ಪಾಲಿಸಲಾಗುತ್ತಿದೆ.

ಬೋಧಕ ಹುದ್ದೆಗಳು -138

ಬೋಧಕೇತರರ ಹುದ್ದೆಗಳು -49